# DECEMBER 14, 2024
## AKASHAVANI - DHARWAD
## PRADESH SAMACHARA (KANNADA) 07.05 A.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ಹರ್ಷವರ್ಧನ ಶೀಲವಂತ

<><><>

ಮುಖ್ಯಾಂಶಗಳು:

<><><>

- ಬೆಳಗಾವಿಯ ವಿಧಾನಮಂಡಲ ಚಳಿಗಾಲದ ಅಧಿವೇಶನ; ಉತ್ತರ ಕರ್ನಾಟಕದ ಸಮಸ್ಯೆಗಳ ಕುರಿತು, ವಿಶೇಷ ಚರ್ಚೆ ಆರಂಭ.
- ಅತಿವೃಷ್ಟಿಯಿಂದ ಸಂಭವಿಸಿದ, ವಿವಿಧ ಹಾನಿಗಳಿಗೆ, 297 ಕೋಟಿ ರೂಪಾಯಿ ಪರಿಹಾರ ಮಂಜೂರು.
- ‘ಬಿಯಾಂಡ್ ಬೆಂಗಳೂರು ಯೋಜನೆ’; ಉತ್ತರ ಕರ್ನಾಟಕ ಭಾಗದಲ್ಲಿ, 432 ನವೋದ್ಯಮಗಳು, ನೋಂದಣಿ.
- ಸಮುದಾಯದ ಸಹಭಾಗಿತ್ವದಲ್ಲಿ, ರಾಜ್ಯದ ಸ್ಮಾರಕಗಳ ನಿರ್ವಹಣೆಗೆ, “ನಮ್ಮ ಸ್ಮಾರಕ ದತ್ತು ಯೋಜನೆ”.

<><><>

ಈಗ ವಾರ್ತೆಗಳ ವಿವರ

<><><>

ಕಲ್ಯಾಣ ಹಾಗೂ ಕಿತ್ತೂರು ಕರ್ನಾಟಕ ಪ್ರದೇಶವನ್ನು ಒಳಗೊಂಡ, ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ, 3 ಸಾವಿರದ 740 ಕೋಟಿ ರೂಪಾಯಿ ಮೊತ್ತದ, ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು, ರಾಜ್ಯ ಸರ್ಕಾರ ತೀರ್ಮಾನಿಸಿದೆ. ಬೆಳಗಾವಿಯ ವಿಧಾನಮಂಡಲ ಚಳಿಗಾಲದ ಅಧಿವೇಶನದಲ್ಲಿ, ಉತ್ತರ ಕರ್ನಾಟಕ ಎದುರಿಸುತ್ತಿರುವ ಸಮಸ್ಯೆಗಳ ಕುರಿತು ನಿನ್ನೆಯಿಂದ ವಿಶೇಷ ಚರ್ಚೆ ಆರಂಭವಾಗಿದೆ. ಬೆಳಗಾವಿ ಸುವರ್ಣಸೌಧದಲ್ಲಿ ನಡೆದ, ಸಚಿವ ಸಂಪುಟ ಸಭೆಯಲ್ಲಿ, ವಿವಿಧ ಯೋಜನೆಗಳನ್ನು ಜಾರಿಗೊಳಿಸುವ ನಿರ್ಧಾರ, ಕೈಗೊಳ್ಳಲಾಗಿದೆ ಎಂದು, ಸುದ್ದಿ ಸಂಸ್ಥೆ ವರದಿ ಮಾಡಿದೆ.

<><><>

ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ, ವ್ಯಾಜ್ಯಗಳನ್ನು ಬೆಂಗಳೂರಿನ ಉಚ್ಚ ನ್ಯಾಯಾಲಯದ, ಪ್ರಧಾನ ಪೀಠದಲ್ಲಿ ನಿರ್ವಹಿಸಲಾಗುತ್ತಿದೆ. ಪ್ರಸ್ತುತ ವ್ಯವಸ್ಥೆಯಲ್ಲಿಯೇ, 6 ಜಿಲ್ಲೆಗಳ ವ್ಯಾಜ್ಯಗಳನ್ನು ಸಮರ್ಥವಾಗಿ ಸದರಿ ಪೀಠದಲ್ಲಿ ನಿರ್ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನ ಪರಿ ‍ತ್ತನಲ್ಲಿ ತಿಳಿಸಿದ್ದಾರೆ. ಸದಸ್ಯ ಐವಾನ್ ಡಿ’ಸೋಜಾ ಅವರು, ನಿಯಮ 72ರ ಅಡಿ ಮಂಡಿಸಿದ, ಗಮನ ಸೆಳೆಯುವ ಸೂಚನೆಗೆ, ಮುಖ್ಯಮಂತ್ರಿ ಅವರು, ಲಿಖಿತ ಉತ್ತರ ನೀಡಿದ್ದಾರೆ.

<><><>

ರಾಜ್ಯದಲ್ಲಿ ಅತಿವೃಷ್ಟಿಯಿಂದಾದ ವಿವಿಧ ಹಾನಿಗಳಿಗೆ, ಒಟ್ಟು 297 ಕೋಟಿ ರೂಪಾಯಿ ಪರಿಹಾರ ಪಾವತಿಸಲಾಗಿದೆ ಎಂದು, ಕಂದಾಯ ಖಾತೆ ಸಚಿವ ಕೃ ್ಣ ಬೈರೇಗೌಡ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಶೂನ್ಯ ವೇಳೆ ಚರ್ಚೆಯ ಸಂದರ್ಭದಲ್ಲಿ, ಸಚಿವರು ಮಾತನಾಡಿದರು. ಪ್ರಸಕ್ತ ಮುಂಗಾರು ಅವಧಿಯಲ್ಲಿ 1 ಲಕ್ಷ 59 ಸಾವಿರದ 718 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ಒಟ್ಟು 94 ಕೋಟಿ 94 ಲಕ್ಷ ರೂಪಾಯಿ ಪರಿಹಾರ ವಿತರಿಸಲಾಗಿದೆ. ಮುಂದಿನ ಒಂದೆರಡು ವಾರದಲ್ಲಿ ಎಲ್ಲ ಅರ್ಹ ರೈತರ ಖಾತೆಗಳಿಗೂ ಪರಿಹಾರ ಹಣ ಸಂದಾಯವಾಗಲಿದೆ ಎಂದರು.

<><><>

ವಿವಿಧ ದುರ್ಘಟನೆಗಳಲ್ಲಿ 133 ಜನ ಪ್ರಾಣ ಕಳೆದುಕೊಂಡಿದ್ದು, ತಲಾ 5 ಲಕ್ಷ ರೂಪಾಯಿಯಂತೆ, 6 ಕೋಟಿ 64 ಲಕ್ಷ ರೂಪಾಯಿ, ಅವಲಂಬಿತರಿಗೆ ನೀಡಲಾಗಿದೆ ಎಂದು, ಸಚಿವ ಕೃಷ್ಣ ಬೈರೇಗೌಡ ಹೇಳಿದರು.

<><><>

ಉಡುಪಿ ಜಿಲ್ಲೆಯ ಎಲ್ಲ 60 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ, ಮಣಿಪಾಲ ಟೆಕ್ನೋಲಾಜಿಸ್ ಮತ್ತು ಸೆಲ್ಕೋ ಫೌಂಡೇಶನ್ ಸಂಸ್ಥೆಗಳ ಸಹಯೋಗದಲ್ಲಿ, ಸೌರ ಫಲಕ ಅಳವಡಿಸಿದ್ದನ್ನು, ಜಿಲ್ಲಾಧಿಕಾರಿ ಕೆ. ವಿದ್ಯಾಕುಮಾರಿ ಶ್ಲಾಘಿಸಿದ್ದಾರೆ. ಅಜ್ಜರಕಾಡು ಶ್ರೀ ಕೃ ್ಣ ಸಭಾಂಗಣದಲ್ಲಿ, ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ ಸೋಲಾರ್ ಘಟಕ ಯೋಜನೆಗಳನ್ನು ಅನು ್ಠಾನಗೊಳಿಸಿದ, ಉಭಯ ಸಂಸ್ಥೆಗಳ ಮುಖ್ಯಸ್ಥರಿಗೆ, 'ಸೂರ್ಯ ನಮಸ್ಕಾರ ಅಭಿನಂದನಾ ಸಮಾರಂಭ'ದ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

<><><>

ಮನೆ ಮತ್ತು ವಾಣಿಜ್ಯ ಸಂಕೀರ್ಣಗಳ ಮೇಲೆ, ಸೋಲಾರ್ ರೂಫ್ ಟಾಪ್ ಅಳವಡಿಸಿ, ಉಚಿತ ವಿದ್ಯುತ್ ಪಡೆದುಕೊಳ್ಳಲು, ಪ್ರಧಾನಮಂತ್ರಿ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆ ಫಲಾನುಭವಿಯಾಗುವಂತೆ, ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕೋರಿದ್ದಾರೆ.

<><><>

ಕೇಂದ್ರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ, ಆಯು ್ಮಾನ್ ಭಾರತ ಪ್ರಧಾನಮಂತ್ರಿ ಜನಾರೋಗ್ಯ ಹಾಗೂ ಆರೋಗ್ಯ ಕರ್ನಾಟಕ ಯೋಜನೆ ಅಡಿ, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಶೇಕಡ 42 ರ ್ಟು ಫಲಾನುಭವಿಗಳನ್ನು ನೋಂದಾಯಿಸಲಾಗಿದೆ. ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ಎಸ್.ಎಸ್.ಮಹೇಶಕುಮಾರ ಪ್ರದೇಶ ಸಮಾಚಾರಕ್ಕಾಗಿ, ಮಾಹಿತಿ ನೀಡಿದ್ದಾರೆ.

<><><>

ಡಿ.ಎಚ್.ಓ. ಡಾ. ಎಸ್.ಎಸ್. ಮಹೇಶಕುಮಾರ ಧ್ವನಿ 60 ಸೆಕೆಂದುಗಳು

<><><>

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ರೋಗ ನಿರೋಧಕ ಶಕ್ತಿ ವರ್ಧಿಸಲು ಹಾಗೂ ಮಧುಮೇಹ ನಿಯಂತ್ರಿಸಲು, ಸಿರಿಧಾನ್ಯದ ಬಳಕೆ ಸಹಕಾರಿಯಾಗಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಳಗಾವಿಯ ಸುವರ್ಣಸೌಧದಲ್ಲಿ, ಅಂತಾರಾಷ್ಟ್ರೀಯ ಸಾವಯವ ಮತ್ತು ಸಿರಿಧಾನ್ಯ ವಾಣಿಜ್ಯ ಮೇಳದ, ಪೂರ್ವಭಾವಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದರು. ಸಿರಿಧಾನ್ಯದಲ್ಲಿ ಪ್ರೊಟೀನ್ ಹಾಗೂ ನಾರಿನ ಅಂಶ ಹೆಚ್ಚಾಗಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಸಿರಿಧಾನ್ಯ ಕೃಷಿಯನ್ನು ತೊಡಗಿಸಿಕೊಳ್ಳಬೇಕು ಎಂದರು.

<><><>

ದೇಶದಲ್ಲಿ ಕರ್ನಾಟಕ ರಾಜ್ಯ, ಸಿರಿಧಾನ್ಯ ಉತ್ಪಾದನೆಯಲ್ಲಿ ಮೂರನೇ ಸ್ಥಾನದಲ್ಲಿದೆ. 18 ಲಕ್ಷದ 38 ಸಾವಿರ ಹೆಕ್ಟರ್ ಪ್ರದೇಶದಲ್ಲಿ 22 ಲಕ್ಷದ 16 ಸಾವಿರ ಟನ್ ಗಳ ್ಟ ಸಿರಿಧಾನ್ಯವನ್ನು ರಾಜ್ಯದಲ್ಲಿ ಬೆಳೆಯಲಾಗುತ್ತಿದೆ ಎಂದು ತಿಳಿಸಿದರು.

<><><>

ಬೆಂಗಳೂರಿನ ತ್ರಿಪುರವಾಸಿನಿ ಅರಮನೆ ಮೈದಾನದಲ್ಲಿ ಅಂತಾರಾಷ್ಟ್ರೀಯ ಸಾವಯವ ಮತ್ತು ಸಿರಿಧಾನ್ಯ ವಾಣಿಜ್ಯ ಮೇಳವನ್ನು, ಇದೇ 23 ರಿಂದ, ಮೂರು ದಿನಗಳ ವರೆಗೆ ಆಯೋಜಿಸಲಾಗಿದೆ.

<><><>

ಉತ್ತರ ಕರ್ನಾಟಕ ಭಾಗದಲ್ಲಿ, ಯುವಜನತೆಗೆ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಸಲು, 'ಬಿಯಾಂಡ್ ಬೆಂಗಳೂರು ಕಾರ್ಯಕ್ರಮದಡಿ', 432 ನವೋದ್ಯಮ ಉದ್ದಿಮೆಗಳು ನೋಂದಣಿ ಮಾಡಿಕೊಂಡಿವೆ ಎಂದು, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನ ಪರಿ ್ತಿನಲ್ಲಿ ನಡೆದ, ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ, ವಿಶೇ ' ಚರ್ಚೆ ಸಂದರ್ಭದಲ್ಲಿ ಅವರು, ಮಾತನಾಡಿದರು. ನಿಪುಣ ಕರ್ನಾಟಕ ಯೋಜನೆಯಡಿ, ಇಲೆಕ್ಟ್ರಾನಿಕ್ ವಸ್ತುಗಳನ್ನು ತಯಾರಿಸಲು, ನವೋದ್ಯಮಗಳು ಮುಂದಾಗಿವೆ ಎಂದರು.

<><><>

ರಾಜ್ಯದ 25 ಸಾವಿರ ಪಾರಂಪರಿಕ ತಾಣಗಳ ಪೈಕಿ, 810 ತಾಣಗಳನ್ನು ಮಾತ್ರ ಸಂರಕ್ಷಿಸಲು ಸಾಧ್ಯವಾಗಿದೆ. "ನಮ್ಮ ಸ್ಮಾರಕ ದತ್ತು ಯೋಜನೆ" ಪ್ರಾರಂಭಿಸಲಾಗಿದ್ದು, ಸಮುದಾಯದ ಸಹಭಾಗಿತ್ವದಲ್ಲಿ, ಅಭಿವೃದ್ಧಿ ಪಡಿಸಲಾಗುವುದು ಎಂದು, ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ. ಪಾಟೀಲ ಹೇಳಿದ್ದಾರೆ. ವಿಧಾನ ಪರಿ ್ತಿನಲ್ಲಿ, ಹಣಮಂತ ನಿರಾಣಿ ಅವರ ಗಮನ ಸೆಳೆಯುವ ಸೂಚನೆಗೆ ಸಚಿವರು ಉತ್ತರಿಸಿದರು. ಪ್ರವಾಸೋದ್ಯಮ ನೀತಿ 2020-26ರ ಅಡಿ, ವಿಜಯಪುರ ಹಾಗೂ ಬಾಗಲಕೋಟೆಯ, 44 ಐತಿಹಾಸಿಕ ಪ್ರವಾಸಿ ತಾಣಗಳು, ಪಕ್ಷಿಧಾಮಗಳನ್ನು ಅಭಿವೃದ್ಧಿಪಡಿಸಲು ಗುರುತಿಸಲಾಗಿದೆ ಎಂದರು.

<><><>

ರಾಜ್ಯದಲ್ಲಿ ದೇವದಾಸಿ ಮಹಿಳೆಯರಿಗೆ, ಮಾಸಾಶನ ಯೋಜನೆ ಅಡಿ, ಪ್ರತಿ ತಿಂಗಳು 2 ಸಾವಿರ ರೂಪಾಯಿ, ಆರ್ಥಿಕ ಸಹಾಯ ಯೋಜನೆ ಅಡಿ, 30 ಸಾವಿರ ರೂಪಾಯಿ ಸಹಾಯ ಧನ ಹಾಗೂ ವಿಮುಕ್ತ ದೇವದಾಸಿ ವಸತಿ ಯೋಜನೆಯಡಿ ವಸತಿ ಸೌಲಭ್ಯ ಒದಗಿಸಲಾಗುತ್ತಿದೆ ಎಂದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ. ವಿಧಾನ ಪರಿ ್ತಿನ ಪ್ರಶ್ನೋತ್ತರ ಕಲಾಪದ ವೇಳೆ, ಸದಸ್ಯೆ ಹೇಮಲತಾ ನಾಯಕ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ, ಕೊಪ್ಪಳ ಜಿಲ್ಲೆಯಲ್ಲಿ, 6 ಸಾವಿರದ 18 ದೇವದಾಸಿ ಮಹಿಳೆಯರನ್ನು ಸಮೀಕ್ಷೆ ವೇಳೆ ಗುರುತಿಸಲಾಗಿದೆ. 2 ಸಾವಿರದ 653 ಮಹಿಳೆಯರು ಜೀವಂತವಿದ್ದಾರೆ. ದೇವದಾಸಿ ಪದ್ಧತಿಯನ್ನು ಮೂಲೋತ್ಪಾಟನೆ ಮಾಡಲು, ಸರ್ಕಾರ ಪ್ರಯತ್ನಿಸುತ್ತಿದೆ ಎಂದರು.

<><><>

ಉತ್ತರ ಕರ್ನಾಟಕದ ಎಂಟು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಾಗ, ವಿಮುಕ್ತ ದೇವದಾಸಿಯರಿಗೆ ಪೂರ್ಣ ಪ್ರಮಾಣದಲ್ಲಿ ಪುನರ್ವಸತಿಯನ್ನು ಕಲ್ಪಿಸದೇ ಇರುವ ಸಂಗತಿ, ತಮ್ಮ ಗಮನಕ್ಕೆ ಬಂದಿದೆ ಎಂದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಮಿತಿ ಅಧ್ಯಕ್ಷ ಹಾಗೂ ಶಾಸಕ ಪಿ.ಎಂ. ನರೇಂದ್ರಸ್ವಾಮಿ, ತಿಳಿಸಿದ್ದಾರೆ. ಬೆಳಗಾವಿ ಸುವರ್ಣಸೌಧದ ಪಶ್ಚಿಮದ್ವಾರದ ಬಳಿ, ಸಮಿತಿಯ ಸದಸ್ಯರೊಂದಿಗೆ ಸುದ್ದಿಗೋಷ್ಠಿ ನಡೆಸಿದ ಅವರು, ಸಾವಿರಾರು ಜನ ವಿಮುಕ್ತ ದೇವದಾಸಿಯರು, ಸೂಕ್ತ ವಸತಿ, ಕನಿಷ್ಟ ನಿವೇಶನ ಇಲ್ಲದೇ, ಹಳೆಯ ಪದ್ಧತಿಯಲ್ಲಿ, ದುರ್ಭರ ಬದುಕು ಸವೆಸುತ್ತಿರುವ ಬಗ್ಗೆ, ಸ್ಪ ್ಟವಾದ ವಿಚಾರ ಮತ್ತು ದತ್ತಾಂಶಗಳನ್ನು ಕ್ರೋಢಿಕರಿಸಿ ವರದಿ ಸಲ್ಲಿಸಿದ್ದಾಗಿ, ಹೇಳಿದರು.

<><><>

ಕರ್ನಾಟಕ ಅರೆಭಾ ೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾದೆಮಿ ಸ್ಥಾಪನೆಗೊಂಡು, ನಾಳೆಗೆ, 14 ವ ್ಷಗಳು ಪೂರ್ಣಗೊಳ್ಳುತ್ತಿವೆ. ಈ ಹಿನ್ನೆಲೆಯಲ್ಲಿ, ಕೊಡಗು, ದಕ್ಷಿಣಕನ್ನಡ ಮತ್ತು ಮೈಸೂರು ಜಿಲ್ಲೆಗಳಲ್ಲಿ 'ಅರೆಭಾ ೆ ದಿನಾಚರಣೆ' ಕಾರ್ಯಕ್ರಮಗಳು ಆಯೋಜಿತವಾಗಿವೆ ಎಂದು, ಅಕಾದೆಮಿ ಅಧ್ಯಕ್ಷ ಸದಾನಂದ ಮಾವಜಿ ತಿಳಿಸಿದ್ದಾರೆ.

<><><>

ಇಂದು, 25ನೇ ವರ್ಷದ, ದತ್ತ ಜಯಂತಿ ಕಾರ್ಯಕ್ರಮದ ಹಿನ್ನೆಲೆ, ಚಿಕ್ಕಮಗಳೂರು ನಗರದಲ್ಲಿ ಪೊಲೀಸ್ ಬಿಗಿ ಭದ್ರತೆ ಕೈಗೊಂಡಿದ್ದು, 4 ಸಾವಿರ ಪೊಲೀಸರು ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದಾರೆ. 27 ವಿಶೇಷ ತನಿಖಾ ಠಾಣೆಗಳನ್ನು ಸ್ಥಾಪಿಸಲಾಗಿದೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ, ಕನಕ ಅಧ್ಯಯನ ಪೀಠ, ಕನಕ ಜಯಂತಿ ನಿಮಿತ್ತ, 'ಕನಕದಾಸರ ತಾತ್ವಿಕತೆ; ಆಧುನಿಕ ಸಮಾಜದ ಪರಿಕಲ್ಪನೆ' ವಿಷಯವಾಗಿ, ಇಂದು ರಾಷ್ಟ್ರೀಯ ಸಮ್ಮೇಳನ ಆಯೋಜಿಸಿದೆ.

<><><>

ಮಂಡ್ಯದಲ್ಲಿ ಆಯೋಜಿತ, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ, ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡಿಗರು ಪಾಲ್ಗೊಳ್ಳುವಂತೆ, ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಕೋರಿದ್ದಾರೆ.

<><><>

ದೊಡ್ಡಬಳ್ಳಾಪುರದ ಪ್ರಸಿದ್ಧ ಶ್ರೀ ಘಾಟಿ ಸುಬ್ರಮಣ್ಯಸ್ವಾಮಿ ದೇವಾಲಯದ ಬ್ರಹ್ಮರಥೋತ್ಸವ ಕಾರ್ಯಕ್ರಮ, ಜನೆವರಿ 5 ರಂದು ಜರುಗಲಿದೆ.

<><><>

ಯಾದಗಿರಿ ತಾಲೂಕು, ಮೈಲಾಪುರ ಗ್ರಾಮದ ಮೈಲಾರಲಿಂಗೇಶ್ವರ ಜಾತ್ರೆ, ಜನೆವರಿ 12 ರಿಂದ 18ರ ವರೆಗೆ ನಡೆಯಲಿದೆ.

<><><>

ವಿಜಯನಗರ ಜಿಲ್ಲೆ, ಹೊಸಪೇಟೆಯಲ್ಲಿ 18ನೇ ತಾರೀಖಿನ ವರೆಗೆ, ಲೋಕಾಯುಕ್ತ ಪೊಲೀಸ್ ಉಪ ಅಧೀಕ್ಷಕರು, ಸಾರ್ವಜನಿಕ ಅಹವಾಲುಗಳನ್ನು ಆಲಿಸಲಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ರೋಗ ನಿರೋಧಕ ಶಕ್ತಿ ವರ್ಧನೆಗೆ, ಸಿರಿಧಾನ್ಯಗಳ ಬಳಕೆ ಸಹಕಾರಿ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಅತಿವೃಷ್ಟಿಯಿಂದ ಸಂಭವಿಸಿದ, ವಿವಿಧ ಹಾನಿಗಳಿಗೆ, 297 ಕೋಟಿ ರೂಪಾಯಿ ಪರಿಹಾರ ಮಂಜೂರು.
- 'ಬಿಯಾಂಡ್ ಬೆಂಗಳೂರು ಯೋಜನೆ'; ಉತ್ತರ ಕರ್ನಾಟಕ ಭಾಗದಲ್ಲಿ, 432 ನವೋದ್ಯಮಗಳು, ನೋಂದಣಿ.
- ಸಮುದಾಯದ ಸಹಭಾಗಿತ್ವದಲ್ಲಿ, ರಾಜ್ಯದ ಸ್ಮಾರಕಗಳ ನಿರ್ವಹಣೆಗೆ, "ನಮ್ಮ ಸ್ಮಾರಕ ದತ್ತು ಯೋಜನೆ".

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>

ಹರ್ಷ